2022-23

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : M/s Halvad Renewables Private Limited ಕಂಪನಿಯವರಿಗೆ ಕೊಪ್ಪಳ ಮತ್ತು ಗದಗ ಜಿಲ್ಲೆಗಳ, ಕುಷ್ಟಗಿ ಮತ್ತು ಗಜೇಂದ್ರಗಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 191.7 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

**ಓದಲಾಗಿದೆ:**

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ:KREDL/08/HRPLL- 190.58 MW Kushtagi & Gajendragad/F-24(2022)/474, ದಿನಾಂಕ:24.02.2022.

2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ:KREDL/08/HRPLL-191.7 MW/(190.58 MW/Kushtagi & Gajendragad/F-24(2022)/531, ದಿನಾಂಕ: 07.03.2022.

3) ಹಂಚಿಕೆ ಸಮಿತಿ ಸಭೆ ದಿನಾಂಕ:09.03.2022.

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದನ್ವಯ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Halvad Renewables Private Limited ರವರಿಗೆ ಕೊಪ್ಪಳ ಮತ್ತು ಗದಗ ಜಿಲ್ಲೆಗಳ, ಕುಷ್ಟಗಿ ಮತ್ತು ಗಜೇಂದ್ರಗಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 190.58 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಕೇಂದ್ರ ಸರ್ಕಾರದ Power Grid Corporation of India Limited (PGCIL) ನ ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ SECI ಬಿಡ್ಡಿಂಗ್ / ಮೂರನೇ ವ್ಯಕ್ತಿಗೆ Inter State Transmission System (ISTS) ಮುಖಾಂತರ ವಿದ್ಯುತ್ ಸರಬರಾಜು ಮಾಡುವ ಘಟಕಕ್ಕೆ ಹಂಚಿಕೆ ನೀಡುವಂತೆ ಕೋರಿರುವ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿ ಸಭೆಯಲ್ಲಿ ಚರ್ಚಿಸುವ ಸಲುವಾಗಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದನ್ವಯ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಸರ್ಕಾರಕ್ಕೆ ಮತ್ತೊಮ್ಮೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Halvad Renewables Private Limited ರವರಿಗೆ ಕೊಪ್ಪಳ ಮತ್ತು ಗದಗ ಜಿಲ್ಲೆಗಳ, ಕುಷ್ಟಗಿ ಮತ್ತು ಗಜೇಂದ್ರಗಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 190.58 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಬದಲಾಗಿ ಕೊಪ್ಪಳ ಜಿಲ್ಲೆಯ, ಕುಷ್ಠಗಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 191.7 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಪಡೆಯುವ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕ್ರೆಡಲ್‌ಗೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಕೇಂದ್ರ ಸರ್ಕಾರದ Power Grid Corporation of India Limited (PGCIL) ನ ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ SECI ಬಿಡ್ಡಿಂಗ್ / ಮೂರನೇ ವ್ಯಕ್ತಿಗೆ Inter State Transmission System (ISTS) ಮುಖಾಂತರ ವಿದ್ಯುತ್ ಸರಬರಾಜು ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 4 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ, ಅಳವಡಿಸುವ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

...2

ಮುಂದುವರೆದು, M/s Halvad Renewables Private Limited ಕಂಪನಿಯು ದಿನಾಂಕ: 19.08.2020ರಂದು ನೋಂದಾವಣೆಗೊಂಡಿದ್ದು, ಇದರ ನೋಂದಾಯಿತ ಕಚೇರಿಯು ನವದೆಹಲಿಯಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯು M/s EDF Renouvelables SA, France ಕಂಪನಿಯಿಂದ ಸ್ಥಾಪಿತವಾದ SPV ಸಂಸ್ಥೆಯಾಗಿರುತ್ತದೆ. M/s EDF Renouvelables SA, France ಕಂಪನಿಯವರ ನೆಟ್‌ವರ್ತ್ ದಿನಾಂಕ:31.12.2019ರ ಅಂತ್ಯಕ್ಕೆ ರೂ.33,411.06 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ರವರು ದೃಢೀಕರಣ ಪತ್ರವನ್ನು ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಹಂಚಿಕೆ ಸಮಿತಿ M/s Halvad Renewables Private Limited ರವರಿಗೆ ಕೊಪ್ಪಳ ಮತ್ತು ಗದಗ ಜಿಲ್ಲೆಗಳ, ಕುಷ್ಟಗಿ ಮತ್ತು ಗಜೇಂದ್ರಗಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ISTS ವರ್ಗದಡಿಯಲ್ಲಿ ಹಂಚಿಕೆ ನೀಡುವಂತೆ ಕೋರಿರುವ 191.7 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳವು ಖಾಸಗಿ ಜಮೀನಾಗಿರುತ್ತದೆ. ಸದರಿಯವರು 2.7 ಮೆ.ವ್ಯಾ ಸಾಮರ್ಥ್ಯದ 71 ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿದ್ದು, ಅಳವಡಿಸುವ Wind Turbine ಗಳಿಗೆ ಅಕ್ಷಾಂಶ ಮತ್ತು ರೇಖಾಂಶಗಳನ್ನು ನೀಡಿರುತ್ತಾರೆ. ಆದುದರಿಂದ ಸದರಿ ಅಭಿವೃದ್ಧಿದಾರರು ಅಳವಡಿಸುವ ಪ್ರತಿ ಟರ್ಬೈನ್ ನ footprint ಜಾಗಕ್ಕೆ 4 ಎಕರೆಗಳಂತೆ ಒಟ್ಟು 284 ಎಕರೆ (71 x 4 =284) ಜಮೀನನ್ನು ಮಾತ್ರ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು Toposheet No: 57 A/1 ರಲ್ಲಿ ಉಪಯೋಗಿಸಿ ಕೊಳ್ಳಬಹುದಾಗಿದೆ ಹಾಗೂ ಸದರಿಯವರು ಅಳವಡಿಸುವ ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ (Micrositing Guidelines) ಅಳವಡಿಸಬೇಕಾಗಿರುತ್ತದೆ. ಆದ ಕಾರಣ ಯೋಜನೆಗೆ ಬೇಕಾಗುವ ಜಮೀನನ್ನು ಪಡೆಯುವುದು ಮತ್ತು PGCIL ನಿಂದ Evacuation ಅನುಮತಿ ಪತ್ರ ಹಾಗೂ LTA approval ಪಡೆಯುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ ಎಂದು ತಿಳಿಸುತ್ತಾ, ಈ ಕೆಳಕಂಡ ಷರತ್ತುಗಳಿಗೊಳಪಟ್ಟು M/s Halvad Renewables Private Limited ರವರಿಗೆ ಕೊಪ್ಪಳ ಮತ್ತು ಗದಗ ಜಿಲ್ಲೆಗಳ, ಕುಷ್ಟಗಿ ಮತ್ತು ಗಜೇಂದ್ರಗಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ISTS ವರ್ಗದಡಿಯಲ್ಲಿ 191.7 ಮೆ.ವ್ಯಾ ಸಾಮರ್ಥ್ಯದ ಪವನ ಯೋಜನೆಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಹಂಚಿಕೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

1) ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ ನ್ನು ಕೇಂದ್ರ ಸರ್ಕಾರದ Power Grid Corporation of India Limited (PGCIL) ನ ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ SECI ಬಿಡ್ಡಿಂಗ್ / ಮೂರನೇ ವ್ಯಕ್ತಿಗೆ Inter State Transmission System (ISTS) ಮುಖಾಂತರ ವಿದ್ಯುತ್ ಸರಬರಾಜು ಮಾಡಲು;
2) M/s Siemens Gamesa Renewable Power Private Limited ರವರ 120 ಮೆ.ವ್ಯಾ ಸಾಮರ್ಥ್ಯಕ್ಕೆ ಯಾವುದೇ ತೊಂದರೆಯಾಗದಂತೆ ಅನುಷ್ಠಾನಗೊಳಿಸಲು ಹಂಚಿಕೆ ಆದೇಶವನ್ನು ನೀಡಬಹುದಾಗಿರುತ್ತದೆ.
3) ಈಗಾಗಲೇ ಇತರೆ ಅಭಿವೃದ್ಧಿದಾರರುಗಳು ಹಂಚಿಕೆ/ತಾತ್ವಿಕ ಅನುಮೋದನೆಯನ್ನು ಪಡೆದಿರುವ ಪ್ರದೇಶದಲ್ಲಿ ಪ್ರಸ್ತಾಪಿತ ಯೋಜನೆಯು Overlap ಆಗಿದ್ದಲ್ಲಿ, ಸದರಿಯವರು ಕೋರಿರುವ ಪ್ರಸ್ತಾವನೆಯ ಹಂಚಿಕೆ/ತಾತ್ವಿಕ ಅನುಮೋದನೆಯು ರದ್ದುಗೊಳ್ಳುತ್ತದೆ.

**Tentative WTG Co-ordinates for 191.7 MW capacity wind power project of M/s Halvad Renewables Private Limited.**

| SL No | WTG No | Latitude (N) | | | Longitude (E) | | | Survey No | Village Name | Taluk | District |
|---|---|---|---|---|---|---|---|---|---|---|---|
| | | Deg. | Min. | Sec. | Deg. | Min. | Sec. | | | | |
| 1 | S01 | 15 | 47 | 19.8 | 76 | 2 | 33 | 52, 53 | Yalabunachi | Kushtagi | Koppal |